ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/83/2022**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:13-12-2022.

-:: ಸು ತ್ತೋ ಲೆ ::-

ವಿಷಯ: 2022-23ನೇ ಸಾಲಿನ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗೆ ಪ್ರವೇಶ ಹಾಗೂ ಪಾಲಿಟೆಕ್ನಿಕ್ ವರ್ಗಾವಣೆಗೆ ಪ್ರವೇಶಾವಧಿ ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 14-10-2022 (ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್)
2. ಈ ಕಛೇರಿ ಸುತ್ತೋಲೆ ಪತ್ರ ಸಂ. **DTE-ADMI0ACM2/84/2022** ದಿ:14-10-2022. (ಖಾಸಗಿ ಪಾಲಿಟೆಕ್ನಿಕ್)

*********

2022-23ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಅಂತಿಮ ದಿನಾಂಕ:05-12-2022 ಎಂದು ಉಲ್ಲೇಖ(1)ರ ದಿ:14-10-2022ರ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಆದರೆ ಕೆಲವು ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ಪ್ರವೇಶ ಶುಲ್ಕ & ವರ್ಗಾವಣೆ ಶುಲ್ಕವನ್ನು ಪಾವತಿಸದ ಅರ್ಹ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶಾವಧಿಯನ್ನು ಈ ಕೆಳಕಂಡಂತೆ ವಿಸ್ತರಿಸಿ ಪ್ರವೇಶ ಪಡೆಯಲು ಅನುಮತಿ ನೀಡಲಾಗಿದೆ.

- **3 & 5ನೇ ಸೆಮಿಸ್ಟರ್ ಪ್ರವೇಶ ಹಾಗೂ ಮರುಪ್ರವೇಶ ಪಡೆಯಲು ದಿನಾಂಕ:14-12-2022 ರ ಒಳಗೆ ದಂಡ ಶುಲ್ಕ ರೂ. 1000/-ನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**
- **3 & 5ನೇ ಸೆಮಿಸ್ಟರ್ ಪಾಲಿಟೆಕ್ನಿಕ್ ವರ್ಗಾವಣೆ ಸಂಬಂಧ ದಿನಾಂಕ:14-12-2022 ರ ಒಳಗೆ ವರ್ಗಾವಣೆ ಶುಲ್ಕ ರೂ.1,000/- ನ್ನು ಪಾವತಿಸಿರುವುದನ್ನು ಪರಿಶೀಲಿಸಿ ದಿ:15-12-2022ರ ಒಳಗೆಪ್ರವೇಶ ನೀಡುವುದು.**

ಮೇಲ್ಕಂಡಂತೆ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಲಾಗಿದೆ. 03 ಮತ್ತು 05ನೇ ಸೆಮಿಸ್ಟರ್‌ಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ನಿಯಮಗಳ ಪ್ರಕಾರ ಅರ್ಹತೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಪ್ರವೇಶ ನೀಡತಕ್ಕದ್ದು. ಮೇಲ್ಕಂಡ ಅವಧಿ ವಿಸ್ತರಣೆ ಹೊರತುಪಡಿಸಿ ಉಲ್ಲೇಖ(1) & (2)ರಲ್ಲಿನ ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

Scanned with CamScanner

ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು. ನಿಯಮಗಳನ್ನು ಮೀರಿ ಮಾಡಿದ ಪ್ರವೇಶಗಳಿಗೆ ಸಂಬಂಧಿಸಿದ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗುತ್ತಾರೆ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

12/12/22

**ಜಂಟಿ ನಿರ್ದೇಶಕರು(ಆಡಳಿತ)**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಇವರಿಗೆ,**

***ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.***

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರವರ ಆಪ್ತಶಾಖೆಗೆ.
4. ಕಾರ್ಯದರ್ಶಿಯವರ ಆಪ್ತಶಾಖೆಗೆ.
5. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
6. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಆರ್.ಡಿ.ಎಂ ವಿಭಾಗಗಳಿಗೆ.
8. ಇಆರ್‌ಎಸ್(3) ವಿಭಾಗಕ್ಕೆ.
9. ಕಛೇರಿ ಪ್ರತಿ.

Scanned with CamScanner